# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 11.08.2011**

ಭಾರತ ಸರ್ಕಾರವು ಪ್ರತಿಯೊಬ್ಬ ನಿವಾಸಿಗೆ ವಿಶಿಷ್ಟ ಗುರುತಿನ ಸಂಖ್ಯೆ ನೀಡಲು ಯು.ಐ.ಡಿ. (ಆಧಾರ್) ಯೋಜನೆಯನ್ನು ರೂಪಿಸಿದೆ. ಈ ಯೋಜನೆಯನ್ನು ರಾಜ್ಯ ಸರ್ಕಾರದ ಮೂಲಕ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ. ಅದಕ್ಕಾಗಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯು ಅವಶ್ಯಕವಾದ ಎಲ್ಲಾ ಮೂಲಭೂತ ಮತ್ತು ಲಾಜಿಸ್ಟಿಕಲ್ ಸಹಯೋಗವನ್ನು ಪಾಲಿಕೆಯಿಂದ ನೀಡಲಾಗುವುದೆಂದು ಪಾಲಿಕೆ ಆಯುಕ್ತರಾದ ಶ್ರೀ ಸಿದ್ದಯ್ಯ ರವರು ಇಂದು ನಡೆದ ನೋಡಲ್ ಅಧಿಕಾರಿಗಳ ಸಭೆಯಲ್ಲಿ ತಿಳಿಸಿದರು.

ಇಂದು ಆಯುಕ್ತರು ಈ ಯೋಜನೆಯನ್ನು ಅನುಷ್ಠಾನಗೊಳಿಸಲು ಪಾಲಿಕೆಯಲ್ಲಿ ನೇಮಿಸಲಾದ ನೋಡಲ್ ಅಧಿಕಾರಿಗಳ ಸಭೆಯಲ್ಲಿ ಮಾತನಾಡಿ, ಈ ಯೋಜನೆ ಬಹಳ ಅತ್ಯುತ್ತಮ ಮತ್ತು ರಾಷ್ಟ್ರೀಯ ಕಾರ್ಯಕ್ರಮವಾಗಿದ್ದು, ಪ್ರತಿಯೊಬ್ಬ ನಿವಾಸಿಗಳು ಸರ್ಕಾರದಿಂದ ನೀಡಲಾಗುವ ಸವಲತ್ತುಗಳನ್ನು ಮತ್ತು ಇತರೆ ಸೇವೆಗಳನ್ನು ಪಡೆಯಲಿಕ್ಕೆ ವಿಶಿಷ್ಟ ಗುರುತಿನ ಸಂಖ್ಯೆ ಅವಶ್ಯಕವಾಗಿದೆ. ಇದರ ಸಹಾಯದಿಂದ ಕೆಲವು ಸೇವೆಗಳನ್ನು ಪಡೆಯುವ ಸಂದರ್ಭದಲ್ಲಿ ಆಗುವ ದುರುಪಯೋಗವನ್ನು ತಪ್ಪಿಸಿ, ಸರ್ಕಾರದ ಸೇವಾ ಯೋಜನೆಗಳನ್ನು ಉತ್ತಮ ರೀತಿಯಲ್ಲಿ ಅನುಷ್ಠಾನಗೊಳಿಸಬಹುದಾಗಿದೆ.

ಆದ್ದರಿಂದ ಮೊದಲನೆ ಹಂತದಲ್ಲಿ ಪಾಲಿಕೆಯ 9 ಸಮುದಾಯ ಭವನಗಳಲ್ಲಿ ಬೆಳಿಗ್ಗೆ 8.00 ರಿಂದ ರಾತ್ರಿ 8.00 ಗಂಟೆಯವರೆಗೆ ಮತ್ತು 5 ಬಿ-ಒನ್ ಕೇಂದ್ರಗಳಲ್ಲಿ ರಾತ್ರಿ 10.00 ರಿಂದ ಬೆಳಿಗ್ಗೆ 6.00 ಗಂಟೆಯವರೆಗೆ ಸೇರಿದಂತೆ ಒಟ್ಟು 14 ಕಡೆ 95 ಘಟಕಗಳನ್ನು ಸ್ಥಾಪಿಸಿ, ನಿವಾಸಿಗಳಿಗೆ ವಿಶಿಷ್ಟ ಗುರುತಿನ ಸಂಖ್ಯೆ ನೀಡುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಈ ಕಾರ್ಯಕ್ರಮ ಆಗಸ್ಟ್ 17, 2011 ರಿಂದ ಪ್ರಾರಂಭವಾಗುವುದು. ಪಾಲಿಕೆ ಅಧಿಕಾರಿಗಳಿಗೆ ಹಾಗೂ ಚುನಾಯಿತ ಪ್ರತಿನಿಧಿಗಳಿಗಾಗಿ ಪಾಲಿಕೆ ಕೇಂದ್ರ ಕಛೇರಿಯಲ್ಲಿ ವಿಶೇಷ ಕೇಂದ್ರಗಳನ್ನು ತೆರೆಯಲಾಗುವುದು.

ಪಾಲಿಕೆಯ ಆಯುಕ್ತರು ಹಂತ ಹಂತವಾಗಿ ನಾಗರಿಕರಿಗೆ ಅನುಕೂಲವಾಗುವಂತೆ ಕೇಂದ್ರಗಳನ್ನು ಪ್ರಾರಂಭಿಸಿ, 9 ತಿಂಗಳಲ್ಲಿ ನಗರದ ಎಲ್ಲಾ ನಿವಾಸಿಗಳಿಗೆ ವಿಶಿಷ್ಟ ಗುರುತಿನ ಸಂಖ್ಯೆ ನೀಡಲಾಗುವುದು. ಸಾರ್ವಜನಿಕರು ಈ ಬಗ್ಗೆ ಅಲಕ್ಷ್ಯ ವಹಿಸದೇ ತಪ್ಪದೇ ಆಧಾರ್ ಯೋಜನೆ ಅಡಿ ವಿಶಿಷ್ಟ ಗುರುತಿನ ಸಂಖ್ಯೆ ಪಡೆಯತಕ್ಕದ್ದು ಎಂದು ಪಾಲಿಕೆ ಆಯುಕ್ತರು ಸಾರ್ವಜನಿಕರಲ್ಲಿ ಮನವಿ ಮಾಡಿದ್ದಾರೆ.

**ಸಾರ್ವಜನಿಕ ಸಂಪರ್ಕಾಧಿಕಾರಿ**